**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

**ಸಂಚಾರಿ ನ್ಯಾಯಾಲಯ, ಅಜ್ಜಂಪುರ**

**ಕ್ರಿ ಮೊ ಸಂಖ್ಯೆ 552/2019**

**ಪಿರ್ಯಾದಿಃ** **ಶ್ರೀ ಎ. ಪ್ರಕಾಶ**

**-ವಿರುದ್ಧ-**

**ಆರೋಪಿ/ತರುಃ** **ಶ್ರೀ ಪ್ರಭುನಾಯ್ಕ**

**ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರಡಿಯಲ್ಲಿ ಆರೋಪಿಯ ಹೇಳಿಕೆ**

ಪ್ರಶ್ನೆ-1: ನೀವು ಸಾಕ್ಷಿದಾರರ ಸಾಕ್ಷ್ಯದ ಹೇಳಿಕೆಯನ್ನು ಕೇಳಿಸಿಕೊಂಡಿದ್ದೀರಾ?

ಉತ್ತರ: Yes

ಪ್ರಶ್ನೆ-2: ಪಿಡಬ್ಲ್ಯೂ-1. ಶ್ರೀ ಎ.ಪ್ರಕಾಶ ತಮ್ಮ ಸಾಕ್ಷ್ಯದಲ್ಲಿ ಆರೋಪಿಯಾದ ನೀವು ತಮ್ಮ ಗೃಹಕೃತ್ಯದ ಉದ್ದೇಶಕೋಸ್ಕರ ದಿನಾಂಕ 21.10.2018 ರಂದು ರೂ.2,00,000/- ಗಳನ್ನು ಸಾಲವಾಗಿ ಪಡೆದು ಮೂರು ತಿಂಗಳ ಒಳಗಾಗಿ ವಾಪಸ್ಸು ನೀಡಲು ಒಪ್ಪಿ ಪಡೆದುಕೊಂಡು, ದಿನಾಂಕ 23.01.2019 ರ ದಿನಾಂಕವನ್ನು ನಮೂದಿಸಿ ಚಿಕ್ಕಮಗಳೂರು ಕೊಡಗು ಗ್ರಾಮೀಣ ಬ್ಯಾಂಕ್, ಅಜ್ಜ್ಮಜಂಪುರ ಶಾಖೆಗೆ ಸೇರಿದ ಚೆಕ್ ಸಂಖ್ಯೆ 160303 ನ್ನು ರೂ.2,00,000/- ಗಳಿಗೆ ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದಿಯು ಕರ್ನಾಟಕ ಬ್ಯಾಂಕ್, ಅಜ್ಜಂಪುರ, ಶಾಖೆಯಲ್ಲಿ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ

ಸದರಿ ಬ್ಯಾಂಕಿನವರು ಸದರಿ ಚೆಕ್ಕು ಆರೋಪಿಯಾದ ನಿಮ್ಮ ಖಾತೆಯ '**Account Closed**' ಎಂಬ ಕಾರಣಕ್ಕಾಗಿ ಅಮಾನ್ಯಗೊಂಡಿದೆ ಎಂದು ಹಿಂಬರಹ ನೀಡಿರುತ್ತಾರೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ False

ಪ್ರಶ್ನೆ-3: ಪಿಡಬ್ಲ್ಯೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅನಂತರ ಫಿರ್ಯಾದಿಯು ದಿನಾಂಕ 22.05.2019 ರಂದು ವಕೀಲರ ಮೂಲಕ ನೋಟೀಸ್ ನೀಡಿದ್ದು, ಸದರಿ ನೋಟೀಸ್ ಆರೋಪಿಯಾದ ನಿಮಗೆ ದಿನಾಂಕ 28.05.2019 ರಂದು ತಲುಪಿದ್ದು, ನಂತರ ನೀವು ಆರೋಪಿ ದಿನಾಂಕ 30.05.2019 ರಂದು ಸದರಿ ನೋಟೀಸ್‌ಗೆ ಉತ್ತರ ನೀಡಿರುತ್ತೀರಿ ಮತ್ತು ಯಾವುದೇ ಹಣವನ್ನು ಮರುಪಾವತಿ ಮಾಡಿರುವುದಿಲ್ಲ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ False

ಪ್ರಶ್ನೆ-4: ಪಿಡಬ್ಲ್ಯೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಮೋಸ ಮಾಡುವ ಉದ್ದೇಶದಿಂದ ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ ಎಂಬ ವಿಚಾರ ತಿಳಿದಿದ್ದರೂ ಸದರಿ ಚೆಕ್ ನ್ನು ತನಗೆ ನೀಡಿರುತ್ತೀರಿ, ನಂತರ ತಾನು ಆರೋಪಿಯಾದ ನಿಮಗೆ ನೋಟೀಸು ನೀಡಿದರೂ ಸಹ ಆರೋಪಿಯಾದ ನೀವು ಸದರಿ ಸಾಲದ ಹಣವನ್ನು ಹಿಂತಿರುಗಿಸಿರುವುದಿಲ್ಲ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರ: False

ಪ್ರಶ್ನೆ-5: ನೀವು ಏನಾದರೂ ಹೇಳುವುದಿದೆಯಾ?

ಉತ್ತರ: Not at this moment

ಪ್ರಶ್ನೆ-6: ಈ ಪ್ರಕರಣದಲ್ಲಿ ನಿಮ್ಮ ಪರ ಸಾಕ್ಷಿ/ಪ್ರತಿರಕ್ಷಣೆ ಏನಾದರೂ ಇದೆಯೇ?

ಉತ್ತರ: Yes

(ಈ ಹೇಳಿಕೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿದ್ದು, ಆರೋಪಿಯ ಉತ್ತರನ್ನು ಯಥಾವತ್ತಾಗಿ ದಾಖಲಿಸಿದ್ದೇನೆ.)

ದಿನಾಂಕ: 14.11.2025

**ಸಹಿ/-**

**(ರಾಹುಲ್ ಶೆಟ್ಟಿಗಾರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂ., ತರೀಕೆರೆ.**
**(ಸಂಚಾರಿ ನ್ಯಾಯಾಲಯ, ಅಜ್ಜಂಪುರ)**